**ಸಿಸಿ ನಂಬರಃ 495/2025**

**ಪಿ.ಡಬ್ಲ್ಯೂಃ 1**

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 30-07-2025**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ)**

**ಮುಂದುವರೆದ ಮುಖ್ಯ ವಿಚಾರಣೆ : ಫಿರ್ಯಾದುದಾರರ ಪರ ಶ್ರೀ ಜೆ.ಡಿ.ಬಿ. ವಕೀಲರಿಂದ,**

ನನಗೆ ಈ ಪ್ರಕರಣವನ್ನು ನಡೆಸಲು ಫಿರ್ಯಾದಿ ಸೊಸೈಟಿಯವರು ಅಧಿಕಾರ ನೀಡಿರುವುದಕ್ಕೆ ಸಂಬಂಧಿಸಿದಂತೆ ಠರಾವಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ಕೊಟ್ಟ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ಚೆಕ್ಕ ಸಂಖ್ಯೆ985124 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಚೆಕ್‌ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-2(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-3 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ-4, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರೋಪಿಯ ಸಾಲದ ಅರ್ಜಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಕರಾರಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಆರೋಪಿಯ ಸಾಲದ ಡಿಮಾಂಡ ಪ್ರೊಮಿಸರಿ ನೋಟಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಆರೋಪಿಗೆ ಸಾಲದ ಹಣ ಪಾವತಿ ಮಾಡಿದ ಬಾಬ್ತು ರಶೀದಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-10 ಎಂದು, ಸಾಲದ ಖಾತೆಯ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

**(ನಿಪಿ 7 ರಿಂದ 10 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**